*

**ಪಿ.ಸಿ.ಆರ್ ನಂಃ 5/2026**

**ಪಿಡಬ್ಲೂಃ 1**

**<u>ಸಾಕ್ಷಿಗೆ ದಿನಾಂಕ 20-02-2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು</u>**

**<u>ಫಿರ್ಯಾದಿಯ ಪ್ರಮಾಣೀಕೃತ ಹೇಳಿಕೆ:</u>**

ನಾನು ನನ್ನ ಪ್ರಮಾಣೀಕೃತ ಹೇಳಿಕೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದ ವಿಷಯಗಳು ಸತ್ಯ ಮತ್ತು ನಿಜ ಇರುತ್ತದೆ ಆದ್ದರಿಂದ ಸದರಿ ನನ್ನ ಪ್ರಮಾಣ ಪತ್ರವನ್ನು ಪ್ರಮಾಣೀಕೃತ ಹೇಳಿಕೆಯನ್ನಾಗಿ ಪರಿಗಣಿಸಬೇಕಾಗಿ ಪ್ರಾರ್ಥಿಸುತ್ತೇನೆ. ನಾನು ಈ ಕೆಳಗಿನ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತ್ತಿದ್ದೇನೆ.

1) ನಾನು ದಿನಾಂಕ: 08.10.2025ರ ಚೆಕ್ ಸಂಖ್ಯೆ: 000039 ನ್ನು ಹಾಜರುಪಡಿಸಿದ್ದು, ಅದನ್ನು ನಿಶಾನೆ ಪಿ-1ಎಂದು, ಅದರಲ್ಲಿರುವ ಆರೋಪಿಯ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಅದನ್ನು ನಿಶಾನೆ ಪಿ-1(ಎ) ಎಂದು ಗುರುತಿಸಲಾಯಿತು.
2) ಬ್ಯಾಂಕ್‌ನವರು ನೀಡಿದ ಮೆಮೊವನ್ನು ಹಾಜರುಪಡಿಸಿದ್ದು, ಅದನ್ನು ನಿಶಾನೆ ಪಿ-2 ಎಂದು ಗುರುತಿಸಲಾಯಿತು.
3) ನಾನು ನನ್ನ ವಕೀಲರ ಮುಖಾಂತರ ದಿನಾಂಕ: 26.12.2025ರಂದು ಆರೋಪಿಗೆ ಕಳುಹಿಸಿದ ನೋಟೀಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಶಾನೆ ಪಿ-3 ಎಂದು ಗುರುತಿಸಲಾಯಿತು.
4) ಸದರಿ ನೋಟೀಸಿನ ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು, ಅದನ್ನು ನಿಶಾನೆ ಪಿ-4 ಎಂದು ಗುರುತಿಸಲಾಯಿತು.
5) ಸದರಿ ನೋಟೀಸ್ ಆರೋಪಿತನಿಗೆ ತಲುಪಿದ ಬಗ್ಗೆ ನೀಡಿದ ಪೋಸ್ಟಲ್ ಟ್ರಾಕ್ ಕಂಸೈನ್ಮೆಂಟ್‌ನ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಶಾನೆ ಪಿ-5 ಎಂದು ಗುರುತಿಸಲಾಯಿತು.

**ಆದ್ದರಿಂದ ನನ್ನ ಪ್ರಮಾಣೀಕೃತ ಹೇಳಿಕೆಯನ್ನು ಪರಿಗಣಿಸಿ ಆರೋಪಿಗೆ ಸಮನ್ಸ್ ಕಳುಹಿಸಬೇಕಾಗಿ ಕೇಳಿಕೊಳ್ಳುತ್ತೇನೆ. ಅದೇ ರೀತಿ ಆರೋಪಿ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಬೇಕೆಂದು ಕೇಳಿಕೊಳ್ಳುತ್ತೇನೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ. ಹೇ . ಕೇ. ಸರಿ ಇದೆ.

ಸಿವಿಲ್ ನ್ಯಾಯಾಧೀಶರು, ಚಿತ್ತಾಪೂರ.